ಕರ್ನಾಟಕ ವಿಧಾನ ಪರಿಷತ್ತು

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1364
2	ಸದಸ್ಯರ ಹೆಸರು	:	ಶ್ರೀ ಅರವಿಂದ ಕುಮಾರ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
3	ಉತ್ತರಿಸುವ ದಿನಾಂಕ	:	23.09.2021
4	ಉತ್ತರಿಸುವ ಸಚಿವರು	:	ಗೃಹ ಸಚಿವರು

ಪ್ರ ಸಂ.	ಪ್ರಶ್ನೆ	ಉತ್ತರ
ಅ	ಚಿಕ್ಕಮಗಳೂರು ಜಿಲ್ಲೆಯ ಗೋಣಿಬೀಡು ಠಾಣೆಯ ಕಿರುಗುಂದ ಗ್ರಾಮದ ದಲಿತ ಯುವಕನ ಮೇಲಾದ ಪ್ರಕರಣ ಸರ್ಕಾರದ ಗಮನಕ್ಕೆ ಬಂಧಿದೆಯೇ?	ಗಮನಕ್ಕೆ ಬಂದಿರುತ್ತದೆ.
ಆ	ಬಂದಿದ್ದಲ್ಲಿ, ಈ ಪ್ರಕರಣದಲ್ಲಿ ಭಾಗಿಯಾಗಿದ್ದ ಸಬ್ ಇನ್ಸ್‌ಪೆಕ್ಟರ್‌ರವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ಮತ್ತು ಯಾವ ಕಾಯಿದೆಯಡಿ ಪ್ರಕರಣವನ್ನು ದಾಖಲು ಮಾಡಲಾಗಿದೆ?	ಪ್ರಕರಣದಲ್ಲಿ ಭಾಗಿಯಾಗಿದ್ದ ಸಬ್ ಇನ್ಸ್‌ಪೆಕ್ಟರ್ ಶ್ರೀ ಅರ್ಜುನ್ ಹೊರಕೇರಿ ಕೆ. ಪಿ.ಎಸ್.ಐ., ಗೋಣಿಬೀಡು ಠಾಣೆ ಇವರ ವಿರುದ್ಧ ಗೋಣಿಬೀಡು ಪೊಲೀಸ್ ಠಾಣಾ ಮೊಕದ್ದಮೆ ಸಂಖ್ಯೆ:18/2021 ಕಲಂ 323, 242, 504, 506, 330, 348 ಐಪಿಸಿ ಸಹಿತ 3(1)(a), 3(1)(e), 3(1)(r), 3(2)(v)(a), 3(2)(v) (ii), SC & ST (Prevention of Atrocities) Amendement Act, 2015 ರೀತ್ಯಾ ಮತ್ತು 19/2021ರ ಕಲಂ 448, 354(a), 354(b), 323, 341, 506 ಐಪಿಸಿ ರೀತ್ಯಾ ಪ್ರಕರಣ ದಾಖಲಾಗಿರುತ್ತದೆ. ಈ ಎರಡೂ ಪ್ರಕರಣಗಳನ್ನು ಮುಂದಿನ ತನಿಖೆಗಾಗಿ ಸಿಐಡಿಗೆ ವರ್ಗಾಯಿಸಲಾಗಿರುತ್ತದೆ. ಸದರಿಯವರನ್ನು ದಿನಾಂಕ:23.05.2021 ರಂದು ಸೇವೆಯಿಂದ ಅಮಾನತ್ತುಗೊಳಿಸಿ, ಅವರ ಲೀನ್ ಅನ್ನು ಉಡುಪಿ ಜಿಲ್ಲೆಗೆ ಸ್ಥಳಾಂತರಿಸಲಾಗಿರುತ್ತದೆ ಮತ್ತು ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಪ್ರಗತಿಯಲ್ಲಿರುತ್ತದೆ.
ಇ	ಹಾಗಿದ್ದಲ್ಲಿ, ಈ ಸಬ್ ಇನ್ಸ್‌ಪೆಕ್ಟರ್ ಅನ್ನು ಬಂಧಿಸಲಾಗಿದೆಯೇ? ಬಂದಿಸಿದ್ದು ಯಾವಾಗ?	ಆರೋಪಿತರನ್ನು ಡಿವೈಎಸ್‌ಪಿ., ಸಿ.ಐ.ಡಿ. ಬೆಂಗಳೂರು ರವರು ದಿನಾಂಕ 01.09.2021 ರಂದು ದಸ್ತಗಿರಿ ಮಾಡಿ ದಿನಾಂಕ 02.09.2021 ರಂದು ಘನ ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದು, ಹಾಲಿ ನ್ಯಾಯಾಂಗ ಬಂಧನದಲ್ಲಿರುತ್ತಾರೆ.
ಈ	ದೌರ್ಜನ್ಯಕ್ಕೆ ಒಳಗಾದ ಯುವಕನಿಗೆ ಪರಿಹಾರ ನೀಡಲಾಗಿದೆಯೇ? ನೀಡಿದ್ದಲ್ಲಿ, ಪರಿಹಾರದ ಮೊತ್ತ ಎಷ್ಟು?	ದೌರ್ಜನ್ಯಕ್ಕೆ ಒಳಗಾದ ಯುವಕ ಶ್ರೀ ಪುನೀತ್ ಕೆ. ಎಲ್ ರವರಿಗೆ ದಿನಾಂಕ 24.05.2021 ರಂದು ರೂ. 50,000.00 (ಶೇ 25% ಭಾಗ, 1ನೇ ಕಂತು) ಪರಿಹಾರ ಧನವನ್ನು ನೀಡಲಾಗಿದೆ.

ಸಂಖ್ಯೆ: ಒಇ 91 ಪಿಇಐ 2021

(ಆರಗ ಜ್ಞಾನೇಂದ್ರ)
ಗೃಹ ಸಚಿವರು